ಅ) ರಾಜ್ಯದಲ್ಲಿ ಗ್ರಾಮೀಣ ಕೃಪಾಂಕ ನೌಕರರ ಮರು ನೇಮಕಾತಿಗೆ ರಚಿಸಲಾಗಿರುವ ವಿಶೇಷ ನೇಮಕಾತಿ ನಿಯಮದ ಆಧಾರದ ಮೇಲೆ ಎಷ್ಟು ಅಭ್ಯರ್ಥಿಗಳನ್ನು ಮರುನೇಮಕಾತಿ ಮಾಡಿಕೊಳ್ಳಲಾಗಿದೆ;

ಆ) ಈ ವಿಶೇಷ ನೇಮಕಾತಿ ನಿಯಮಾವಳಿಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿರುವುದರ ಹಿನ್ನೆಲೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಲಭ್ಯವಿರುವ ಮಾಹಿತಿ ಪ್ರಕಾರ ಕರ್ನಾಟಕ ಸಿವಿಲ್ ಸೇವೆಗಳು (ಗ್ರಾಮೀಣ ಕೃಪಾಂಕದ ಸೌಲಭ್ಯದೊಂದಿಗೆ ನೇಮಕಾತಿ ಹೊಂದಿದ ನೌಕರರ ವಿಲೀನಾತಿ) ವಿಶೇಷ) ನಿಯಮಗಳು 2003ರ ಅನ್ವಯ ಸುಮಾರು 4400 ಅಭ್ಯರ್ಥಿಗಳನ್ನು ಮರುನೇಮಕ ಮಾಡಿಕೊಳ್ಳಲಾಗಿದೆ.

ಇ) ಸರ್ವೋಚ್ಚ ನ್ಯಾಯಾಲಯವು ನೀಡಿರುವ ಮಧ್ಯಂತರ ಡತೆಯಾಜ್ಞೆಯ ಹಿನ್ನೆಲೆಯಲ್ಲಿ ಮೇಲ್ಕಂಡ ವಿಶೇಷ ನಿಯಮಗಳಡಿ ಮುಂದಿನ ಆದೇಶದವರೆಗೆ ಯಾವುದೇ ನೇಮಕಾತಿಯನ್ನು ಮಾಡಬಾರದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮೇಲ್ಕಂಡ ನಿಯಮಗಳನ್ನು ಸರ್ವೋಚ್ಚ ನ್ಯಾಯಾಲಯದ ಮುಂದೆ ಸಮರ್ಥಿಸಿಕೊಳ್ಳಲು ಮತ್ತು ಮಧ್ಯಂತರ ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬೈಲಹೊಂಗಲ ನಗರದಲ್ಲಿ ಒಳಚರಂಡಿ ಯೋಜನೆಯನ್ನು ಕೈಗೊಳ್ಳುವ ಬಗ್ಗೆ

42 (21) : ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಒಳಚರಂಡಿ ಯೋಜನೆ ಕೈಗೊಳ್ಳುವ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಎಂದು ಕಳುಹಿಸಲಾಯಿತು? ಹಾಗೂ ಈಗ ಈ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಆ) ನಗರಸಭೆ ತುಂಬಬೇಕಾದ ವಂತಿಗೆಯನ್ನು ತುಂಬಲು ನಗರಸಭೆಗೆ ಆಗದೇ ಇರುವುದರಿಂದ ಹುಡ್ಕೋದಿಂದ ಸರ್ಕಾರ ಸಾಲ ಕೊಡಿಸಲು ಕ್ರಮ ಕೈಗೊಳ್ಳಲಾಗುವುದೇ?

ಇ) ಬೈಲಹೊಂಗಲ ನಗರದ ಹಳೆಯ ಒಳಚರಂಡಿ ನೀರು ಮಲಪ್ರಭಾ ನದಿಗೆ ಸೇರುತ್ತಿದ್ದು, ಅಲ್ಲಿನ ಪರಿಸರ ನಾಶವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಅದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಗರಸಭೆಯವರು ತುಂಬಬೇಕಾದ ವಂತಿಗೆಯನ್ನು ತುಂಬಲು ಸರ್ಕಾರದ ಹಣಕಾಸಿನ ಸಂಸ್ಥೆಗಳಿಂದ ಸಾಲ ರೂಪವಾಗಿ ಹಣ ಕೂಡಿಸುವ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಯವರು) :

ಅ) ಸದರಿ ಯೋಜನೆಯನ್ನು ಕೇಂದ್ರ ಸರ್ಕಾರಕ್ಕೆ ಇನ್ನೂ ಸಲ್ಲಿಸಿರುವುದಿಲ್ಲ. 589.00 ಲಕ್ಷ ರೂ.ಗಳ ಯೋಜನೆಯನ್ನು ತಯಾರಿಸಿದ್ದು, ಯೋಜನೆಯ ಆರ್ಥಿಕ ಮಾದರಿಯಂತೆ ಸ್ಥಳೀಯ ಸಂಸ್ಥೆಯು ಭರಿಸಬೇಕಾಗಿರುವ 117.80 ಲಕ್ಷ ರೂ.ಗಳ ವಂತಿಗೆಯ 1/3 ಭಾಗವನ್ನು ಭರಿಸಲು ಸ್ಥಳೀಯ ಸಂಸ್ಥೆಯನ್ನು ಕೋರಲಾಗಿದೆ. ಠೇವಣಿ ಯಿಟ್ಟ ನಂತರ ಮುಂದಿನ ಕ್ರಮ ಜರುಗಿಸಲಾಗುವುದು.

ಆ) ಸರ್ಕಾರದ ಆರ್ಥಿಕ ಮಾದರಿಯಂತೆ ಒಳಚರಂಡಿ ಯೋಜನೆಯ ಅಂದಾಜು ವೆಚ್ಚದ ಶೇ.20 ರಷ್ಟು ಸ್ಥಳೀಯ ಸಂಸ್ಥೆಯಿಂದ ಪಾವತಿ ಮಾಡಬೇಕಾಗಿರುತ್ತದೆ. ಬಾಕಿ. ಶೇ 80 ಮೊತ್ತವನ್ನು ಆರ್ಥಿಕ ಸಂಸ್ಥೆಯಿಂದ ಸಾಲ ಹಾಗೂ ಸರ್ಕಾರದ ಸಾಲದ ರೂಪದಲ್ಲಿ ಒದಗಿಸಲಾಗುವುದು.

ಇ) ಬಂದಿದೆ.

ಈ) ಸ್ಥಳೀಯ ಸಂಸ್ಥೆಯಿಂದ ಭರಿಸಬೇಕಾದ ವಂತಿಗೆ ಮೊತ್ತವನ್ನು ಸ್ಥಳೀಯ ಸಂಸ್ಥೆಯಿಂದಲೇ ವ್ಯವಸ್ಥೆ ಮಾಡಬೇಕಾಗುತ್ತದೆ.

ಬೆಳಗಾವಿಯಲ್ಲಿ ವಿಧಾನ ಸಭೆಯ ಅಧಿವೇಶನ ನಡೆಸುವುದರ ಬಗ್ಗೆ

44 (23) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿಯಲ್ಲಿ ಕರ್ನಾಟಕ ವಿಧಾನ ಮಂಡಲದ ಅಧಿವೇಶನ ನಡೆಸುವ ಸಲುವಾಗಿ ಮನವಿಗಳು ಸರ್ಕಾರಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಬೆಳಗಾವಿಯಲ್ಲಿ ವಿಧಾನ ಸಭೆಯ ಅಧಿವೇಶನ ನಡೆಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಕೆರೆಗಳ ಒತ್ತುವರಿ ಬಗ್ಗೆ

47 (412) : ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು;

ಆ) ಈ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಒತ್ತುವರಿಯನ್ನು ತೆರವು ಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ರಾಜ್ಯದಲ್ಲಿ 3223 ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿರುತ್ತವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 205 ಸಣ್ಣ ನೀರಾವರಿ ಕೆರೆಗಳಿದ್ದು, ಇವುಗಳಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 39 ಸಣ್ಣ ನೀರಾವರಿ ಕೆರೆಗಳು ಇರುತ್ತವೆ.

ಆ) 3323 ಕೆರೆಗಳ ಪೈಕಿ 96 ಕೆರೆಗಳ ಅಂಗಳದ 997.49 ಹೆಕ್ಟೇರ್ ವಿಸ್ತೀರ್ಣ ಒತ್ತುವರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಈ ಕೆರೆಗಳಲ್ಲಿ ಒತ್ತುವರಿ ಆಗಿರುವ ವಿಸ್ತೀರ್ಣ 997.49 ಹೆಕ್ಟೇರ್ ಪೈಕಿ ಈಗಾಗಲೇ 364.09 ಹೆಕ್ಟೇರ್ ಒತ್ತುವರಿ ತೆರವುಗೊಳಿಸಲಾಗಿದೆ.

1. ಅನಂತರ ಈ ಕೆರೆಗಳಲ್ಲಿ ಮತ್ತೆ ಒತ್ತುವರಿ ಆಗದಂತೆ ತಡೆಯಲು ಮತ್ತು ಉಳಿದ ಕೆರೆಗಳಲ್ಲಿ ಒತ್ತುವರಿ ಆಗಿರುವುದನ್ನು ತಿಳಿಯಲು ಎಲ್ಲಾ ಕೆರೆಗಳ ಭೂಮಾಪನ